ಶ್ರೀ ಎ. ಲಕ್ಷ್ಮಣಸಾಗರ್ (ಪಶು ಮಂತ್ರಿಗಳು).—

ಅ) ಹೌದು.

ಆ) ಹೌದು.

ಇ) ತಪ್ಪಿತಸ್ಥ ಅಧಿಕಾರಿಗಳ ಮೇಲೆ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು.

ಕೆಮ್ಮಣ್ಣುಗುಂಡಿ ಪ್ರವಾಸ ಕೇಂದ್ರಕ್ಕೆ ಸೌಲಭ್ಯಗಳನ್ನೊದಗಿಸುವುದು

೫೨೫ ಶ್ರೀ ಎಸ್. ಆರ್. ಲಕ್ಷ್ಮಯ್ಯ (ಬೀರೂರು).— ಮಾನ್ಯ ಪ್ರವಾಸೋದ್ಯಮ ಮತ್ತು ಪ್ರಚಾರ ಹಾಗೂ ಪ್ರವಾಸೋದ್ಯಮ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕೆಮ್ಮಣ್ಣುಗುಂಡಿ ಪ್ರವಾಸಿ ಕೇಂದ್ರವು ಸ್ವದೇಶಿ ಮತ್ತು ವಿದೇಶಿ ಪ್ರವಾಸಿಗಳನ್ನು ಆಕರ್ಷಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಸದರಿ ಪ್ರವಾಸಿ ಕೇಂದ್ರಕ್ಕೆ ಹೋಗುವ ರಸ್ತೆಗಳು ಹದಗೆಟ್ಟಿರುವ ವಿಷಯ ಸರಕಾರದವರ ಗಮನಕ್ಕೆ ಬಂದಿದೆಯೇ ?

ಇ) ಹಾಗಿದ್ದಲ್ಲಿ, ಸರಕಾರದವರು ರಸ್ತೆಗಳನ್ನು ಸರಿಪಡಿಸಿ ಕೆಮ್ಮಣ್ಣುಗುಂಡಿ ಪ್ರವಾಸಿ ಕೇಂದ್ರಕ್ಕೆ ಬೇಕಾದ ಸೌಲಭ್ಯಗಳನ್ನು ಒದಗಿಸುವರೆ ?

ಶ್ರೀ ಎಂ. ರಘುಪತಿ (ವಾರ್ತಾ, ಪ್ರಚಾರ ಹಾಗೂ ಪ್ರವಾಸೋದ್ಯಮ ಸಚಿವರು).—

ಅ) ಹೌದು.

ಆ) ರಸ್ತೆ ರಿಪೇರಿ ಮಾಡುವ ವಿಚಾರ ಲೋಕೋಪಯೋಗಿ ಇಲಾಖೆಗೆ ಸಂಬಂಧಪಟ್ಟಿದ್ದರಿಂದ, ಪ್ರವಾಸೋದ್ಯಮ ಇಲಾಖೆಯಿಂದ ಕ್ರಮ ತೆಗೆದುಕೊಳ್ಳುವ ಅಗತ್ಯ ಕಂಡುಬರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಧಾರವಾಡದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ಸು ನಿಲ್ದಾಣದಲ್ಲಿ ಸ್ಥಳ ಅಭಾವ

೫೨೬ ಶ್ರೀ ಎಸ್. ಆರ್. ಮೋರೆ (ಧಾರವಾಡ).— ಮಾನ್ಯ ಸಾರಿಗೆ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ಧಾರವಾಡ ಬಸ್ ನಿಲ್ದಾಣದಲ್ಲಿ ಸ್ಥಳ ಇಕ್ಕಟ್ಟಾಗಿರುವುದರಿಂದ ಪ್ರಯಾಣಿಕರಿಗೂ ಮತ್ತು ಅದಕ್ಕೆ ಸಂಬಂಧಪಟ್ಟವರಿಗೆ ಇದರಿಂದ ಬಹಳ ತೊಂದರೆ ಯಾಗುತ್ತಿರುವುದು ಸರ್ಕಾರದವರಿಗೆ ಗೊತ್ತಿದೆಯೇ ?

ಆ) ಧಾರವಾಡ ಬಸ್ ನಿಲ್ದಾಣದಲ್ಲಿ ದೂರದ ಪ್ರಯಾಣದ ಬಸ್ಸುಗಳನ್ನು ತಿರುಗಿಸಲು ಸಾಕಷ್ಟು ಸ್ಥಳಾವಕಾಶವಿಲ್ಲದಿರುವುದೂ ಸರ್ಕಾರದ ಗಮನಕ್ಕೆ ಬಂದಿದೆಯೇ ?

ಇ) ಬಸ್ ನಿಲ್ದಾಣದ ಪಕ್ಕದ ಭೂಮಿಯನ್ನು ವಶಪಡಿಸಿಕೊಳ್ಳುವುದರ ಮೂಲಕ ಈ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರ ಏನಾದರೂ ಪ್ರಯತ್ನ ಮಾಡಿದೆಯೇ ? ಇಲ್ಲದಿದ್ದಲ್ಲಿ ಬಹುದಿನದಿಂದ ಇರತಕ್ಕ ಈ ಸಮಸ್ಯೆಯನ್ನು ಬಗೆಹರಿಸಲು ಸಾರ್ವಜನಿಕ ಹಿತದೃಷ್ಟಿಯಿಂದ ಪಕ್ಕದ ಜಮೀನನ್ನು ಸ್ವಾಧೀನಪಡಿಸಿಕೊಳ್ಳಲು ಸರಕಾರಕ್ಕೆ ಇರತಕ್ಕ ತೊಂದರೆ ಏನು ?

ಶ್ರೀ ಎಂ. ಪಿ. ಪ್ರಕಾಶ್ (ಸಾರಿಗೆ ರಾಜ್ಯ ಮಂತ್ರಿಗಳು).—

ಅ) ಗೊತ್ತಿದೆ.

ಆ) ಬಂದಿದೆ.

ಇ) ಧಾರವಾಡ ಕೇಂದ್ರ ಬಸ್ ನಿಲ್ದಾಣದ ಹಿಂಭಾಗದಲ್ಲಿರುವ ಜಮೀನನ್ನು ಸ್ವಾಧೀನಪಡಿಸಿಕೊಳ್ಳಲು ಪ್ರಯತ್ನ ಮಾಡಲಾಗುತ್ತಿದೆ.